# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 468
ಸದಸ್ಯರ ಹೆಸರು: ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು: ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ: 19.08.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ಸರ್ಕಾರದ "ಶಕ್ತಿ" ಯೋಜನೆ ಅಡಿಯಲ್ಲಿ ಯಾರಿಗೆ ಉಚಿತ ಬಸ್ ಪ್ರಯಾಣ ವ್ಯವಸ್ಥೆಯನ್ನು ನೀಡಲಾಗುತ್ತಿದೆ. | "ಶಕ್ತಿ ಯೋಜನೆ"ಯನ್ನು ದಿನಾಂಕ: 11.06.2023 ರಿಂದ ರಾಜ್ಯದ ನಾಲ್ಕು ಸಾರಿಗೆ ನಿಗಮ/ಸಂಸ್ಥೆಗಳಲ್ಲಿ ಅನುಷ್ಠಾನ ಗೊಳಿಸಲಾಗಿರುತ್ತದೆ. ಶಕ್ತಿ ಯೋಜನೆಯಡಿ ರಾಜ್ಯದ ಎಲ್ಲಾ ನಿವಾಸಿ ಮಹಿಳೆಯರು (ವಿದ್ಯಾರ್ಥಿನಿಯರು ಸೇರಿದಂತೆ) ಮತ್ತು ಲಿಂಗತ್ವ ಅಲ್ಪಸಂಖ್ಯಾತರು, ನಗರ, ಸಾಮಾನ್ಯ ಹಾಗೂ ವೇಗದೂತ ಸಾರಿಗೆಗಳಲ್ಲಿ (ಎ.ಸಿ. ಬಸ್ ಮತ್ತು ಐಷಾರಾಮಿ (Luxury) ಬಸ್‌ಗಳನ್ನು ಹೊರತುಪಡಿಸಿ) ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡಲಾಗಿದೆ.<br><br>ಪುರುಷರಿಗೂ ಉಚಿತ ಬಸ್ ಪ್ರಯಾಣ ವ್ಯವಸ್ಥೆ ಕಲ್ಪಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಆ. | "ಶಕ್ತಿ" ಯೋಜನೆಯಡಿಯಲ್ಲಿ ಪುರುಷರಿಗೂ ಉಚಿತ ಬಸ್ ಪ್ರಯಾಣ ವ್ಯವಸ್ಥೆಯನ್ನು ನೀಡದೆ ಇರಲು ಕಾರಣವೇನು; ಪುರುಷರಿಗೂ ಉಚಿತ ಬಸ್ ಪ್ರಯಾಣ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆ ಸರ್ಕಾರದ ಮುಂದಿದೆಯೇ; | |
| ಇ. | "ಶಕ್ತಿ" ಯೋಜನೆಯನ್ನು ರಾಜ್ಯದ ಎಲ್ಲಾ ಸ್ತರದ ಮಹಿಳೆಯರಿಗೆ ಉಚಿತಗೊಳಿಸಿದ್ದು, ಹಿರಿಯ ಪುರುಷ ಪ್ರಯಾಣಿಕರಿಗೆ ಕೇವಲ 25% ರಿಯಾಯಿತಿಯನ್ನು ನೀಡುವ ಬದಲು ಅವರಿಗೂ ಕೂಡ ಉಚಿತ ಪ್ರಯಾಣ ವ್ಯವಸ್ಥೆ ನೀಡದೇ ಇರಲು ಕಾರಣವೇನು; ಇವರಿಗೂ ಉಚಿತ ವ್ಯವಸ್ಥೆ ನೀಡುವ ಬಗ್ಗೆ ಸರ್ಕಾರದ ನಿಲುವೇನು; | ಪ್ರಸ್ತುತ, 60 ವರ್ಷ ಮತ್ತು ಅದಕ್ಕೂ ಹೆಚ್ಚು ವಯಸ್ಸಿನ ಕರ್ನಾಟಕ ರಾಜ್ಯದ ಹಿರಿಯ ನಾಗರಿಕರಿಗೆ ರಾಜ್ಯದ ನಾಲ್ಕು ಸಾರಿಗೆ ನಿಗಮ/ಸಂಸ್ಥೆಗಳ ನಗರ/ನಗರ ಹೊರವಲಯ, ಸಾಮಾನ್ಯ, ವೇಗದೂತ ಮತ್ತು ರಾಜಹಂಸ ಬಸ್ಸುಗಳಲ್ಲಿ ರಾಜ್ಯ ಹಾಗೂ ಅಂತರರಾಜ್ಯ ಪ್ರಯಾಣಕ್ಕೆ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿ ಒದಗಿಸಲಾಗುತ್ತಿದೆ.<br><br>ಹಿರಿಯ ಪುರುಷ ಪ್ರಯಾಣಿಕರಿಗೆ ಉಚಿತ ಬಸ್ ಪ್ರಯಾಣ ವ್ಯವಸ್ಥೆ ನೀಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಈ. | ರಾಜ್ಯದ ಎಲ್ಲಾ ಮಹಿಳೆಯರಿಗೆ ರಾಜ್ಯದಾದ್ಯಂತ ಉಚಿತ ಪ್ರಯಾಣ ವ್ಯವಸ್ಥೆ ನೀಡಿ ವಿದ್ಯಾರ್ಥಿಗಳಿಗೆ ಮಾತ್ರ ಕೇವಲ ಮನೆ ಹಾಗೂ ಶಿಕ್ಷಣ ಸಂಸ್ಥೆಯ ನಡುವೆ ಉಚಿತ ಪ್ರಯಾಣವನ್ನು ನಿಗದಿಪಡಿಸಲು | ರಾಜ್ಯದ ಶಾಲಾ-ಕಾಲೇಜುಗಳಲ್ಲಿನ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸಲು ಕ್ರಮ ತೆಗೆದುಕೊಳ್ಳಲಾಗಿದೆ. ಬಸ್ ಪಾಸ್ ಹೊಂದಿರುವ ವಿದ್ಯಾರ್ಥಿಗಳು, ತಮ್ಮ ವಾಸ ಸ್ಥಳದಿಂದ ವಿದ್ಯಾ ಸಂಸ್ಥೆಯವರೆಗೆ ಗರಿಷ್ಠ 60 ಕಿ.ಮೀ ವರೆಗೆ |

DFA/2891575

| | | |
|---|---|---|
| | ಕಾರಣವೇನು; ಅವರಿಗೂ ಕೂಡ ರಾಜ್ಯಾದ್ಯಂತ ಉಚಿತ ಪ್ರಯಾಣವನ್ನು ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಪ್ರಯಾಣಿಸಬಹುದಾಗಿದೆ.<br><br>ವಿದ್ಯಾರ್ಥಿಗಳಿಗೆ (ಹುಡುಗರು) ರಾಜ್ಯಾದ್ಯಂತ ಉಚಿತ ಪ್ರಯಾಣ ವ್ಯವಸ್ಥೆಯನ್ನು ಕಲ್ಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಉ. | ಸರ್ಕಾರಿ ಶಾಲೆಯ ಮಕ್ಕಳಿಗೆ ವರ್ಷದಲ್ಲಿ ಕೇವಲ ಒಂದೇ ಬಾರಿ ಕರೆದುಕೊಂಡು ಹೋಗುವ ವಾರ್ಷಿಕ ಶಾಲಾ ಶೈಕ್ಷಣಿಕ ಪ್ರವಾಸವು ಈ ಯೋಜನೆ ಅಡಿಯಲ್ಲಿ ಒಳಗೊಂಡಿದೆಯೇ; ಇಲ್ಲ ಎಂದಾದಲ್ಲಿ ಕಾರಣವೇನು; ಈ ಶಕ್ತಿ ಯೋಜನೆಯಲ್ಲಿ ಸರ್ಕಾರಿ ಮಕ್ಕಳ ಶಾಲಾ ಪ್ರವಾಸವನ್ನು ಉಚಿತವನ್ನಾಗಿಸುವ ವ್ಯವಸ್ಥೆಯನ್ನು ಜಾರಿಗೊಳಿಸುವ ಬಗ್ಗೆ ಸರ್ಕಾರದ ನಿಲುವನ್ನು ಸ್ಪಷ್ಟಪಡಿಸುವುದು. | ಸರ್ಕಾರಿ ಶಾಲೆಯ ಮಕ್ಕಳಿಗೆ ವಾರ್ಷಿಕ ಶಾಲಾ ಶೈಕ್ಷಣಿಕ ಪ್ರವಾಸವನ್ನು ಕೈಗೊಳ್ಳುವ ಕುರಿತು ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.<br><br>ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರವಾಸಕ್ಕಾಗಿ ನಾಲ್ಕು ಸಾರಿಗೆ ಸಂಸ್ಥೆಗಳಿಂದ ಒಪ್ಪಂದದ ಮೇರೆಗೆ ನೀಡಲಾಗುವ ದರದಲ್ಲಿ ಪ್ರತಿ ಕಿ.ಮೀ.ಗೆ ರೂ.2/- ರಿಯಾಯಿತಿ ನೀಡಲಾಗುತ್ತಿದೆ.<br><br>ಶಕ್ತಿ ಯೋಜನೆಯಲ್ಲಿ ಸರ್ಕಾರಿ ಶಾಲಾ ಮಕ್ಕಳ ಪ್ರವಾಸವನ್ನು ಉಚಿತವಾಗಿ ಜಾರಿಗೊಳಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಟಿಡಿ 210 ಟಿಸಿಕ್ಯೂ 2026

(ಬಿ.ಎಸ್. ಸುರೇಶ)
ಸಾರಿಗೆ ಸಚಿವರು



File No. TD/210/TCQ/2026-Sec 1-Trans (Computer No. 2265039)